673 (417) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) – ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರ ರೈತರಿಗೆ ಕೊಡುತ್ತಿರುವ ಬೆಂಬಲ ಬೆಲೆಯು ರೈತರಿಗೆ ತಲುಪದೆ ಮಧ್ಯವರ್ತಿಗಳು ಹಾಗೂ ಮಾರಾಟಗಾರರ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

675 (921) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) – ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2006ರಲ್ಲಿ ಮಂಡಿಸಲಾದ ಆಯವ್ಯಯದಲ್ಲಿ ಕೃಷಿ ಇಲಾಖೆಗೆ ಸಂಬಂಧಪಟ್ಟಂತೆ ಯಾವ ಯಾವ ಹೊಸ ಯೋಜನೆಗಳನ್ನು ಪ್ರಕಟಿಸಲಾಗಿದೆ ;

ಆ) ಈ ಪೈಕಿ ಎಷ್ಟು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು) ;

ಇ) ಈ ಯೋಜನೆಗಾಗಿ ಮೀಸಲಿಡಲಾಗಿರುವ ಹಣವೆಷ್ಟು ;

ಈ) ಈ ಪೈಕಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; ಇಲ್ಲಿಯವರೆಗೆ (ದಿನಾಂಕ 15.1.2007ರವರೆವಿಗೆ) ಖರ್ಚು ಮಾಡಲಾದ ಹಣವೆಷ್ಟು ; (ಜಿಲ್ಲಾವಾರು ಹಾಗೂ ಕಾರ್ಯಕ್ರಮವಾರು ವಿವರ ಒದಗಿಸುವುದು);

ಶ್ರೀ ಬಂಡೆಪ್ಪ ಕಾಶಂಪೂರ್ (ಕೃಷಿ ಸಚಿವರು) :

ಅ) 2006–07ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಇಲಾಖೆಗೆ ಸಂಬಂದಿಸಿದಂತೆ, ಈ ಕೆಳಕಂಡ ಹೊಸ ಯೋಜನೆಗಳನ್ನು ಘೋಷಿಸಲಾಗಿದೆ.

1. ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ರಿಯಾಯಿತಿ ದರದಲ್ಲಿ ಎತ್ತು ಮತ್ತು ಎತ್ತಿನ ಗಾಡಿಗಳ ವಿವರಣೆ.

2. ರಿಯಾಯಿತಿ ದರದಲ್ಲಿ ಪ್ರತಿ ತಾಲ್ಲೂಕಿಗೆ ತಲಾ 20ರಂತೆ ಟ್ರಾಕ್ಟರ್, ಮಿನಿ ಟ್ರಾಕ್ಟರ್ ಮತ್ತು ಪವರ್ ಟಿಲ್ಲರ್‌ಗಳ ವಿತರಣೆ.